# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:UG:2025-26: 2091

ದಿನಾಂಕ:16.10.2025

## ಸುತ್ತೋಲೆ

**ವಿಷಯ:-2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಪರಿಷ್ಕರಿಸುವ ಕುರಿತು.**

ಉಲ್ಲೇಖ:-1.ಸರ್ಕಾರಿ ಆದೇಶ ಸಂಖ್ಯೆ:ಇಡಿ212ಯುಎನ್ಇ2024, ಬೆಂಗಳೂರು, ದಿನಾಂಕ:30.09.2025.

2.ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ:15.10.2025

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾನಿಲಯ/ಕಾಲೇಜು ಶಿಕ್ಷಣ/ ಅನುದಾನ/ಅನುದಾನರಹಿತ ಕಾಲೇಜುಗಳಲ್ಲಿ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಪರಿಷ್ಕೃತ ಸೆಮಿಸ್ಟರ್ ತರಗತಿಗಳ ದಿನಾಂಕವನ್ನು ಅಳವಡಿಸಿಕೊಂಡು ಅದರಂತೆ ಪರೀಕ್ಷಾ ದಿನಾಂಕಗಳನ್ನು ನಿಗದಿಗೊಳಿಸುವ ಸಂಬಂಧ **ದಿನಾಂಕ:17.10.2025ರಂದು ಅಪರಾಹ್ನ 3.30 ಗಂಟೆಗೆ ವಿಶ್ವವಿದ್ಯಾನಿಲಯದ ಡಾ ಸರ್ ಎಂ ವಿಶ್ವೇಶ್ವರಯ್ಯ** ಸಭಾಂಗಣದಲ್ಲಿ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಸಭೆ ಕರೆಯಲಾಗಿದ್ದು, ಸದರಿ ಸಭೆಗೆ ತಪ್ಪದೇ ಹಾಜರಾಗಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಇವರಿಗೆ

1. ಎಲ್ಲಾ ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಇ-ಮೇಲ್ ಕಳುಹಿಸುವುದು.

ಪ್ರತಿಗಳು:

1. ಉಪಕುಲಸಚಿವರು (ಪರೀಕ್ಷಾ ವಿಭಾಗ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: ಸದರಿ ಸಭೆಯಲ್ಲಿ ಭಾಗವಹಿಸುವಂತೆ ಸೂಚಿಸಲಾಗಿದೆ.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.